ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ರಾಜ್ಯದಲ್ಲಿರುವ ವಸತಿ ಶಾಲೆಗಳ ಕುರಿತು

ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) -

19 (165) ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುತ್ತಿರುವ ವಿವಿಧ ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪ್ರತಿ ವಸತಿ ಶಾಲೆಗಳ ಮಾಹಿತಿ ನೀಡುವುದು)

(ಇ) ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಪೈಕಿ ಖಾಯಂ ನೌಕರರ ಸಂಖ್ಯೆ ಹಾಗೂ ಗುತ್ತಿಗೆ ಆಧಾರಿತ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಪ್ರತಿ ವಸತಿ ಶಾಲೆಗಳ ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ವಿವಿಧ ವಸತಿ ಶಾಲೆಗಳ ಪೈಕಿ ಎಷ್ಟು ಶಾಲೆಗಳು ಸ್ವಂತ ಕಟ್ಟಡದಲ್ಲಿ ಹಾಗೂ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿರುವ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಸಲ್ಪಡುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)